# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ :

ಆಡಳಿತ ಇಲಾಖೆ : ಶಾಂತಿನಗರ : ಬೆಂಗಳೂರು–27


ಸಂ:ಬೆಂಮಸಾಸಂ/ಕೇಕ/ಆಡಳಿತ/ನೇಮಕಾತಿ/ಆರ್1/ 4007/2019–20 ದಿನಾಂಕ:20/09/2019

## ಪ್ರಕಟಣೆ

**ವಿಷಯ:** ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಥವಾ ವೈದ್ಯಕೀಯ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಇಬ್ಬರು ಸ್ಟ್ಯಾಫ್ ನರ್ಸ್‌ಗಳ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಬಗ್ಗೆ

*****

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಆಸ್ಪತ್ರೆಗೆ ಇಬ್ಬರು ನುರಿತ ಹಾಗೂ ಅನುಭವವುಳ್ಳ ಸ್ಟ್ಯಾಫ್ ನರ್ಸ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಒಂದು ವರ್ಷದ ಅವಧಿಗೆ ನಿಯೋಜಿಸಿಕೊಳ್ಳಲು ಉದ್ದೇಶಿಸಲಾಗಿದೆ.

ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಥವಾ ವೈದ್ಯಕೀಯ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಮತ್ತು ಅನುಭವವುಳ್ಳ ಅಭ್ಯರ್ಥಿಗಳು ಈ ಸಂಬಂಧ ವಿದ್ಯಾರ್ಹತೆ ಹಾಗೂ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಬಗ್ಗೆ ಅಗತ್ಯ ದಾಖಲಾತಿಗಳೊಂದಿಗೆ ಸ್ವಯಂ ವಿವರಣೆ (Bio-data) ದೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಸಂಬಂಧ ಹೆಚ್ಚಿನ ವಿವರಗಳನ್ನು ಸಂಸ್ಥೆಯ ಅಧಿಕೃತ ವೆಬ್‌ಸೈಟ್ https://www.mybmtc.karnataka.gov.in/ ನಲ್ಲಿ ನೀಡಲಾಗಿರುತ್ತದೆ.

ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು 62 ವರ್ಷಗಳಿಗಿಂತ ಕಡಿಮೆ ವಯಸ್ಸುಳ್ಳವರಾಗಿರಬೇಕು ಹಾಗೂ ದಿನಾಂಕ: 21/10/2019 ರೊಳಗಾಗಿ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಆಡಳಿತ ಇಲಾಖೆ, 5ನೇ ಮಹಡಿ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು 560027 ರವರಿಗೆ ಎಲ್ಲಾ ದಾಖಲಾತಿಗಳೊಂದಿಗೆ ನೇರವಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸುವುದು.

ನೇಮಕಗೊಂಡ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 15,000/-( ಹದಿನೈದು ಸಾವಿರ ರೂಪಾಯಿ) ಗಳ ಸಂಭಾವನೆ ನೀಡಲಾಗುವುದು. (ಸಂಭಾವನೆಯು ಪರಿಷ್ಕರಣೆಗೆ ಒಳಪಟ್ಟಿರುತ್ತದೆ).

ಸಹಿಯಾಗಿದೆ
ವ್ಯವಸ್ಥಾಪಕ ನಿರ್ದೇಶಕರು